ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಕೆ.ಪಿ.ಎಸ್.ಸಿ ಆಭ್ಯರ್ಥಿಗಳಿಗೆ ಆಗಿರುವ ತೊಂದರೆಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

689 (952) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಲೋಕಸೇವಾ ಆಯೋಗವು 1998ನೇ ಸಾಲಿನ ಕೆ.ಎ.ಎಸ್.ಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯ ನೀಡಿರುವ ತೀರ್ಪಿನ 3ನೇ ನಿರ್ದೇಶನದಂತೆ ಎಷ್ಟು ಉತ್ತರ ಪತ್ರಿಕೆಗಳನ್ನು ಪರಿಗಣಿಸಲು ಉಲ್ಲೇಖಿಸಲಾಗಿದೆ;

(ಆ) ಸದರಿ ತೀರ್ಪಿನ ಅನ್ವಯ ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 22-08-2019ರಂದು ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿ ಪರಿಗಣಿಸಿರುವ ಒಟ್ಟು ಉತ್ತರ ಪತ್ರಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಆಯ್ಕೆ ಪ್ರಕ್ರಿಯೆಯಲ್ಲಿ ನ್ಯಾಯಾಲಯ ನೀಡಿರುವ ತೀರ್ಪನ್ನು ಉಲ್ಲಂಘಿಸಿ ಹೆಚ್ಚು ಪತ್ರಿಕೆಗಳನ್ನು ಪರಿಗಣಿಸಿ, ಕೇವಲ 15 ಅಭ್ಯರ್ಥಿಗಳಿಗೆ ಅನುಕೂಲ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ಈ ಆಯ್ಕೆ ಪ್ರಕ್ರಿಯೆಯಲ್ಲಿ ಯಾವುದಾದರೂ ಅಭ್ಯರ್ಥಿಗಳು ಅಕ್ರಮವೆಸÀಗಿರುವುದು ಕಂಡು ಬಂದಿದೆಯೇ; ಹಾಗಿದ್ದಲ್ಲಿ ಯಾರು ಯಾರು ಪದೇ ಪದೇ ತಪ್ಪನ್ನು ಎಸಗಿ 3ನೇ ಬಾರಿ ಪಟ್ಟಿ ಪ್ರಕಟಿಸಲು ಕಾರಣವಾಗಿದ್ದಾರೆ ಮತ್ತು ಅಮಾಯಕ ಅಭ್ಯರ್ಥಿಗಳಿಗೆ ತೊಂದರೆ ನೀಡುತ್ತಿರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಉ) ದಿನಾಂಕ: 22-08-2019ರ ಆಯ್ಕೆ ಪಟ್ಟಿಯಿಂದಲೇ ಹೊರಗುಳಿದು ಕೆಲಸ ಕಳೆದುಕೊಂಡ ಅಭ್ಯರ್ಥಿಗಳೆಷ್ಟು ; (ವಿವರ ನೀಡುವುದು)

(ಊ) 13-14 ವರ್ಷ ಸೇವೆ ಸಲ್ಲಿಸಿ ಕೆಲಸ ಕಳೆದುಕೊಂಡವರನ್ನು ಮುಂದುವರೆಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ಸ್ಪಷ್ಟ ಉತ್ತರ ನೀಡುವುದು)